ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

298 (355) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ 3 ವರ್ಷಗಳಲ್ಲಿ ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗಾಗಿ ಬಿಡುಗಡೆಯಾದ ಅನುದಾನವೆಷ್ಟು; ಈ ಕಾಮಗಾರಿಗಳ ಟೆಂಡರ್ ಮೊತ್ತವೆಷ್ಟು; ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರ ವಿವರಗಳೇನು; (ಆದೇಶ ಸಹಿತ ಕಾಮಗಾರಿವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳ ಟೆಂಡರ್ ಅನ್ನು ಕೆಲವೇ ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಮಾಡಲಾಗಿದ್ದು, under ground cable ಅಳವಡಿಸುವ ಕಾಮಗಾರಿಗಳಲ್ಲಿ ಭಾರಿ ಅವ್ಯವಹಾರಗಳು ನಡೆದಿರುವ ಆರೋಪಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ಪ್ರಕರಣವಾರು ಮಾಹಿತಿ ನೀಡುವುದು)